ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ:31/ಸುತ್ತೋಲೆ/ವಿ.ವೇ/2023-24

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು,ದಿನಾಂಕ:10.10.2023.

ಸುತ್ತೋಲೆ

ವಿಷಯ: 2023-24 ನೇ ಸಾಲಿಗೆ ಸರ್ಕಾರಿ ಮತ್ತು ಅನುದಾನಿತ ಪದವಿ ಮತ್ತು ಸ್ನಾತಕೋತ್ತರ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿ/ ವಿದ್ಯಾರ್ಥಿನಿಯರು ವಿದ್ಯಾರ್ಥಿವೇತನ ಮಂಜೂರಾತಿಗಾಗಿ ಎಸ್‌ಎಸ್ ಪಿ ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸುವ ಬಗ್ಗೆ

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ:ಇಡಿ 237 ಹೆಚ್‌ಪಿಸಿ 2022,ಬೆಂಗಳೂರು, ದಿನಾಂಕ:11.01.2022.ಮತ್ತು ದಿ:16.01.2022ರ ತಿದ್ದುಪಡಿ ಆದೇಶ

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ ಸರ್ಕಾರದ ಆದೇಶದ ಅನ್ವಯ 2023-24 ನೇ ಸಾಲಿಗೆ ಸರ್ಕಾರಿ ಮತ್ತು ಅನುದಾನಿತ ಪದವಿ ಮತ್ತು ಸ್ನಾತಕೋತ್ತರ ಪದವಿ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿ/ವಿದ್ಯಾರ್ಥಿನಿಯರು ಇಲಾಖೆಯಿಂದ ಮಂಜೂರು ಮಾಡುತ್ತಿರುವ ಸಂಚಿ ಹೊನ್ನಮ್ಮ, ಸರ್.ಸಿ.ವಿ.ರಾಮನ್ ವಿದ್ಯಾರ್ಥಿವೇತನ, ಹೆಚ್‌ಐವಿ/ಲೆಪ್ರಸಿ ವಿದ್ಯಾರ್ಥಿವೇತನ, ಹೆಣ್ಣು ಮಕ್ಕಳ ಶುಲ್ಕ ಮರುಪಾವತಿ, ಪದವಿ ತರಗತಿಯಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಸೈನಿಕ ಸಿಬ್ಬಂದಿ ಮಕ್ಕಳ ಕಾಲೇಜು ಶುಲ್ಕ ಮರುಪಾವತಿ ಮಂಜೂರಾತಿಗಾಗಿ ಎಸ್.ಎಸ್.ಪಿ ಪೋರ್ಟಲ್‌ನ ಈ ಮುಂದಿನ ಲಿಂಕ್ https://ssp.postmatric.karnataka.gov.in/2324_sa/signin.aspx ಮೂಲಕ ಅರ್ಜಿ ಸಲ್ಲಿಸಲು ಸೂಚಿಸಲಾಗಿದೆ.

| ಕ್ರ. ಸಂ | ವಿದ್ಯಾರ್ಥಿವೇತನ ಯೋಜನೆಯ ಹೆಸರು | ಅರ್ಜಿ ಸಲ್ಲಿಸಲು ಬೇಕಿರುವ ಅರ್ಹತೆ | ಅರ್ಜಿ ಸಲ್ಲಿಸುವ ಬಗ್ಗೆ |
|---|---|---|---|
| 1 | ಸಂಚಿ ಹೊನ್ನಮ್ಮ ವಿದ್ಯಾರ್ಥಿವೇತನ | ಕಲಾ ಮತ್ತು ವಾಣಿಜ್ಯ ಪದವಿ ತರಗತಿಯ ವಿದ್ಯಾರ್ಥಿನಿಯರು ಮಾತ್ರ | 1 ರಿಂದ 5 ರವರೆಗಿನ ವಿದ್ಯಾರ್ಥಿವೇತನಕ್ಕೆ ವಿದ್ಯಾರ್ಥಿಗಳು ಎಸ್.ಎಸ್.ಪಿ ಪೋರ್ಟಲ್ ಮೂಲಕ ಒಂದೇ ಅರ್ಜಿಯನ್ನು ಸಲ್ಲಿಸಬೇಕು |
| 2 | ಸರ್.ಸಿ.ವಿ.ರಾಮನ್ ವಿದ್ಯಾರ್ಥಿವೇತನ | ವಿಜ್ಞಾನ ಪದವಿ ತರಗತಿಯ ವಿದ್ಯಾರ್ಥಿ/ವಿದ್ಯಾರ್ಥಿನಿಯರು | |
| 3 | ಹೆಚ್‌ಐವಿ/ಲೆಪ್ರಸಿ ವಿದ್ಯಾರ್ಥಿವೇತನ | ಸರ್ಕಾರಿ, ಅನುದಾನಿತ/ಅನುದಾನರಹಿತ ಪದವಿ/ಸ್ನಾತಕೋತ್ತರ ಕಾಲೇಜುಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಹೆಚ್‌ಐವಿ/ಲೆಪ್ರಸಿ ರೋಗ ಪೀಡಿತ ವಿದ್ಯಾರ್ಥಿಗಳು ಅಥವಾ ರೋಗ ಪೀಡಿತ ಪೋಷಕರ ಮಕ್ಕಳು | |
| 4 | ಸೈನಿಕ ಸಿಬ್ಬಂದಿ ಮಕ್ಕಳ ಕಾಲೇಜು ಶುಲ್ಕ ಮರುಪಾವತಿ | ಸರ್ಕಾರಿ ಮತ್ತು ಅನುದಾನಿತ ಪದವಿ ಕಾಲೇಜುಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಸೈನಿಕ ಸಿಬ್ಬಂದಿ ಮಕ್ಕಳು | |
| 5 | ಹೆಣ್ಣು ಮಕ್ಕಳ ಶುಲ್ಕ ಮರುಪಾವತಿ | ಸರ್ಕಾರಿ ಪದವಿ ಮತ್ತು ಸ್ನಾತಕೋತ್ತರ ಕಾಲೇಜುಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಎಲ್ಲಾ ವರ್ಗದ ವಿದ್ಯಾರ್ಥಿನಿಯರು. | |

ಷರತ್ತುಗಳು ಮತ್ತು ನಿಬಂಧನೆಗಳು

1.ಸರ್.ಸಿ.ವಿ.ರಾಮನ್ ವಿದ್ಯಾರ್ಥಿವೇತನ:-

- 2023-24 ನೇ ಸಾಲಿಗೆ ಸರ್ಕಾರಿ ಮತ್ತು ಅನುದಾನಿತ ಪದವಿ ಕಾಲೇಜುಗಳಲ್ಲಿ (ಅನುದಾನರಹಿತ ಕೋರ್ಸ್ ಗಳನ್ನು ಹೊರತುಪಡಿಸಿ) ವಿಜ್ಞಾನದ ಕೋರ್ಸ್ ಗಳಿಗೆ ಪ್ರವೇಶ ಪಡೆದು ಭೌತಶಾಸ್ತ್ರ, ರಸಾಯನಶಾಸ್ತ್ರ, ಗಣಿತ, ಭೂಗರ್ಭಶಾಸ್ತ್ರ, ಸಸ್ಯಶಾಸ್ತ್ರ ಮತ್ತು ಪ್ರಾಣಿ ಶಾಸ್ತ್ರ ವಿಷಯಗಳಲ್ಲಿ ಕನಿಷ್ಠ 2 ವಿಷಯಗಳನ್ನಾದರೂ ತೆಗೆದುಕೊಂಡು ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಮಾತ್ರ ಪ್ರಥಮ ವರ್ಷದ ನೂತನ ಸರ್.ಸಿ.ವಿ.ರಾಮನ್ ವಿದ್ಯಾರ್ಥಿವೇತನ ಪಡೆಯಲು ಅರ್ಹರಿರುತ್ತಾರೆ.
- ಪ್ರಥಮ ವರ್ಷದ ನೂತನ ಸರ್.ಸಿ.ವಿ.ರಾಮನ್ ವಿದ್ಯಾರ್ಥಿವೇತನ ಮಂಜೂರಾತಿಗಾಗಿ ದ್ವಿತೀಯ ಪಿ.ಯು.ಸಿಯಲ್ಲಿ ಸಾಮಾನ್ಯ ವಿದ್ಯಾರ್ಥಿಗಳು ಶೇ 65 ರಷ್ಟು ಅಂಕಗಳನ್ನು ಪರಿಶಿಷ್ಟ ಜಾತಿ/ಪಂಗಡದ ವಿದ್ಯಾರ್ಥಿಗಳು ಶೇ 60 ರಷ್ಟು ಅಂಕಗಳನ್ನು ಪಡೆದಿರಬೇಕು.
- ದ್ವಿತೀಯ ಪಿ.ಯು.ಸಿಯಲ್ಲಿ ಪ್ರಥಮ ಪ್ರಯತ್ನದಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳು ಮಾತ್ರ ಸರ್.ಸಿ.ವಿ.ರಾಮನ್ ವಿದ್ಯಾರ್ಥಿವೇತನ ಮಂಜೂರಾತಿಗೆ ಅರ್ಹರಿರುತ್ತಾರೆ.
- ನವೀಕರಣ ವಿದ್ಯಾರ್ಥಿವೇತನ ಮಂಜೂರಾತಿ ಪಡೆಯಲು ವಿದ್ಯಾರ್ಥಿಗಳು ಹಿಂದಿನ ವರ್ಷದ ಎರಡೂ ಸೆಮಿಸ್ಟರ್ ಪರೀಕ್ಷೆಯಲ್ಲಿ ಪ್ರಥಮ ಪ್ರಯತ್ನದಲ್ಲಿ ಉತ್ತೀರ್ಣರಾಗಿರಬೇಕು.
- 2023-24 ನೇ ಸಾಲಿನ ವಿದ್ಯಾರ್ಥಿವೇತನ ಮಂಜೂರಾತಿಗೆ ಎಸ್ ಎಸ್ ಪಿ ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸುವಾಗ ವಿದ್ಯಾರ್ಥಿಗಳು ಅಗತ್ಯ ದಾಖಲೆಗಳನ್ನು SSP PORTAL ನಲ್ಲಿ UP LOAD ಮಾಡುವುದು.

2. ಸಂಚಿ ಹೊನ್ನಮ್ಮ ವಿದ್ಯಾರ್ಥಿವೇತನ:-

- 2023-24 ನೇ ಸಾಲಿಗೆ ಸರ್ಕಾರಿ ಮತ್ತು ಅನುದಾನಿತ ಪದವಿ ಕಾಲೇಜುಗಳಲ್ಲಿ (ಅನುದಾನರಹಿತ ಕೋರ್ಸ್ ಗಳನ್ನು ಹೊರತುಪಡಿಸಿ) ಕಲಾ ಮತ್ತು ವಾಣಿಜ್ಯ ಪದವಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿನಿಯರು ಮಾತ್ರ ಪ್ರಥಮ ವರ್ಷದ ನೂತನ ಸಂಚಿ ಹೊನ್ನಮ್ಮ ವಿದ್ಯಾರ್ಥಿವೇತನ ಪಡೆಯಲು ಅರ್ಹರಿರುತ್ತಾರೆ.
- ದ್ವಿತೀಯ ಪಿ.ಯು.ಸಿಯಲ್ಲಿ ಪ್ರಥಮ ಪ್ರಯತ್ನದಲ್ಲಿ ಉತ್ತೀರ್ಣರಾದ ವಿದ್ಯಾರ್ಥಿನಿಯರು ಮಾತ್ರ ಸಂಚಿ ಹೊನ್ನಮ್ಮ ವಿದ್ಯಾರ್ಥಿವೇತನ ಮಂಜೂರಾತಿಗೆ ಅರ್ಹರಿರುತ್ತಾರೆ.
- ಪ್ರಥಮ ವರ್ಷದ ನೂತನ ಸಂಚಿ ಹೊನ್ನಮ್ಮ ವಿದ್ಯಾರ್ಥಿವೇತನ ಮಂಜೂರಾತಿಗಾಗಿ ದ್ವಿತೀಯ ಪಿ.ಯು.ಸಿಯಲ್ಲಿ ಸಾಮಾನ್ಯ ವಿದ್ಯಾರ್ಥಿಗಳು ಶೇ 75 ರಷ್ಟು ಅಂಕಗಳನ್ನು ಪರಿಶಿಷ್ಟ ಜಾತಿ/ಪಂಗಡದ ವಿದ್ಯಾರ್ಥಿಗಳು ಶೇ 60 ರಷ್ಟು ಅಂಕಗಳನ್ನು ಪಡೆದಿರಬೇಕು.
- ನವೀಕರಣ ವಿದ್ಯಾರ್ಥಿವೇತನ ಮಂಜೂರಾತಿ ಪಡೆಯಲು ವಿದ್ಯಾರ್ಥಿಗಳು ಹಿಂದಿನ ವರ್ಷದ ಎರಡೂ ಸೆಮಿಸ್ಟರ್ ಪರೀಕ್ಷೆಯಲ್ಲಿ ಪ್ರಥಮ ಪ್ರಯತ್ನದಲ್ಲಿ ಉತ್ತೀರ್ಣರಾಗಿರಬೇಕು.
- 2023-24 ನೇ ಸಾಲಿನ ವಿದ್ಯಾರ್ಥಿವೇತನ ಮಂಜೂರಾತಿಗೆ ಎಸ್ ಎಸ್ ಪಿ ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸುವಾಗ ವಿದ್ಯಾರ್ಥಿನಿಯರು ಅಗತ್ಯ ದಾಖಲೆಗಳನ್ನು SSP PORTAL ನಲ್ಲಿ UP LOAD ಮಾಡುವುದು.

3. ಹೆಚ್ಐವಿ/ಲೆಪ್ರಸಿ ವಿದ್ಯಾರ್ಥಿವೇತನ:-

- 2023-24 ನೇ ಸಾಲಿಗೆ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಪದವಿ ಮತ್ತು ಸ್ನಾತಕೋತ್ತರ ಪದವಿ ಕಾಲೇಜುಗಳಲ್ಲಿ (ಅನುದಾನರಹಿತ ಕೋರ್ಸ್ ಗಳನ್ನು ಹೊರತುಪಡಿಸಿ) ಪ್ರಥಮ ಪದವಿ ತರಗತಿ ಅಥವಾ ಸ್ನಾತಕೋತ್ತರ ತರಗತಿಗೆ ಪ್ರವೇಶ ಪಡೆದು ವ್ಯಾಸಂಗ ಮಾಡುತ್ತಿರುವ ಹೆಚ್ಐವಿ/ಲೆಪ್ರಸಿ ರೋಗ ಪೀಡಿತ ವಿದ್ಯಾರ್ಥಿಗಳು ಅಥವಾ ಹೆಚ್ಐವಿ/ಲೆಪ್ರಸಿ ರೋಗ ಪೀಡಿತ ಪೋಷಕರ ಮಕ್ಕಳು ಮಾತ್ರ ಈ ಯೋಜನೆಯಡಿ ವಿದ್ಯಾರ್ಥಿವೇತನ ಪಡೆಯಲು ಅರ್ಹರಿರುತ್ತಾರೆ.
- ಈ ಯೋಜನೆಯಡಿ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ಇತರೆ ಇಲಾಖೆಗಳು ನೀಡುವ ವಿದ್ಯಾರ್ಥಿವೇತನಕ್ಕೆ ಅರ್ಹರಿರುವುದಿಲ್ಲ.

- ವಿಶ್ಲೇಷ ಸೂಚನೆ:- ಎಸ್ ಎಸ್ ಪಿ ಪೋರ್ಟಲ್ ಮೂಲಕ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳು ತಮ್ಮ ಅಥವಾ ಪೋಷಕರು ಕುಷ್ಠ ರೋಗಕ್ಕೆ ಚಿಕಿತ್ಸೆ ಪಡೆದ ಬಗ್ಗೆ ಎಂ.ಡಿ.ಟಿ ಪ್ರಮಾಣ ಪತ್ರ ಅಥವಾ ಹೆಚ್ ಐ ವಿ ರೋಗಕ್ಕೆ ಚಿಕಿತ್ಸೆ ಪಡೆದ ಬಗ್ಗೆ ಎ ಆರ್ ಟಿ ಪ್ರಮಾಣ ಪತ್ರವನ್ನು ಜಿಲ್ಲಾ ವೈದ್ಯಾಧಿಕಾರಿಗಳಿಂದ ದೃಢೀಕರಿಸಿ ಅರ್ಜಿಯೊಂದಿಗೆ ದಾಖಲಾತಿಗಳನ್ನು ಕಾಲೇಜು ಶಿಕ್ಷಣ ಇಲಾಖೆಯ ಕೇಂದ್ರ ಕಛೇರಿಗೆ ಸಲ್ಲಿಸುವುದು.
- ನವೀಕರಣ ವಿದ್ಯಾರ್ಥಿವೇತನ ಮಂಜೂರಾತಿ ಪಡೆಯಲು ವಿದ್ಯಾರ್ಥಿಗಳು ಹಿಂದಿನ ವರ್ಷದ ಎರಡೂ ಸೆಮಿಸ್ಟರ್ ಪರೀಕ್ಷೆಯಲ್ಲಿ ಪ್ರಥಮ ಪ್ರಯತ್ನದಲ್ಲಿ ಉತ್ತೀರ್ಣರಾಗಿರಬೇಕು.
- 2023-24 ನೇ ಸಾಲಿನ ವಿದ್ಯಾರ್ಥಿವೇತನ ಮಂಜೂರಾತಿಗೆ SSP ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸುವಾಗ ವಿದ್ಯಾರ್ಥಿಗಳು ಅಗತ್ಯ ದಾಖಲೆಗಳನ್ನು SSP PORTAL ನಲ್ಲಿ UP LOAD ಮಾಡಿ ದಾಖಲಾತಿಗಳನ್ನು ಕಾಲೇಜು ಶಿಕ್ಷಣ ಇಲಾಖೆಯ ಕೇಂದ್ರ ಕಛೇರಿಗೆ ಸಲ್ಲಿಸುವುದು.

4.ಹೆಣ್ಣು ಮಕ್ಕಳ ಶುಲ್ಕ ಮರುಪಾವತಿ:-

- 2023-24 ನೇ ಸಾಲಿಗೆ ಸರ್ಕಾರಿ ಪದವಿ ಮತ್ತು ಸ್ನಾತಕೋತ್ತರ ಪದವಿ ಕಾಲೇಜುಗಳಲ್ಲಿ (ಅನುದಾನರಹಿತ ಕೋರ್ಸ್ ಗಳನ್ನು ಹೊರತುಪಡಿಸಿ) ಪ್ರಥಮ ಪದವಿ ತರಗತಿ ಅಥವಾ ಸ್ನಾತಕೋತ್ತರ ತರಗತಿಗೆ ಪ್ರವೇಶ ಪಡೆದು ವ್ಯಾಸಂಗ ಮಾಡುತ್ತಿರುವ ಎಲ್ಲಾ ವರ್ಗದ ಹೆಣ್ಣು ಮಕ್ಕಳು ಕಾಲೇಜು ಶಿಕ್ಷಣ ಇಲಾಖೆಯಿಂದ ಮಂಜೂರು ಮಾಡುವ ಶುಲ್ಕ ಮರುಪಾವತಿ ಸೌಲಭ್ಯ ಪಡೆಯಲು ಅಗತ್ಯ ದಾಖಲೆಗಳೊಂದಿಗೆ ಎಸ್ ಎಸ್ ಪಿ ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸಬಹುದು.
- ಕಾಲೇಜು ಶಿಕ್ಷಣ ಇಲಾಖೆಯಡಿ ಶುಲ್ಕ ಮರುಪಾವತಿಗೆ ಅರ್ಜಿ ಸಲ್ಲಿಸುವ ವಿದ್ಯಾರ್ಥಿನಿಯರು ಇತರ ಇಲಾಖೆಗಳು ನೀಡುವ ಯಾವುದೇ ಶುಲ್ಕ ಮರುಪಾವತಿ ಪಡೆದಿರಬಾರದು
- ಸಂಚಿ ಹೊನ್ನಮ್ಮ/ಸರ್.ಸಿ.ವಿ.ರಾಮನ್ ವಿದ್ಯಾರ್ಥಿವೇತನ ಪಡೆದ ವಿದ್ಯಾರ್ಥಿನಿಯರು ಹೆಣ್ಣುಮಕ್ಕಳ ಶುಲ್ಕ ಮರುಪಾವತಿ ಯೋಜನೆಗೆ ಅರ್ಹರಿರುತ್ತಾರೆ

5. ಸೈನಿಕ ಸಿಬ್ಬಂದಿ ಮಕ್ಕಳ ಕಾಲೇಜು ಶುಲ್ಕ ಮರು ಪಾವತಿ:-

- 2023-24 ನೇ ಸಾಲಿಗೆ ಸರ್ಕಾರಿ, ಅನುದಾನಿತ ಪದವಿ ಕಾಲೇಜುಗಳಲ್ಲಿ (ಅನುದಾನರಹಿತ ಕೋರ್ಸ್ ಗಳನ್ನು ಹೊರತುಪಡಿಸಿ) ಪ್ರಥಮ ಪದವಿ ತರಗತಿಗೆ ಪ್ರವೇಶ ಪಡೆದು ವ್ಯಾಸಂಗ ಮಾಡುತ್ತಿರುವ ದೇಶದ ರಕ್ಷಣಾ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ/ನಿರ್ವಹಿಸಿದ ಸೈನಿಕ ಸಿಬ್ಬಂದಿ ಮಕ್ಕಳು/ದತ್ತು ಮಕ್ಕಳು ಈ ಯೋಜನೆಯಡಿ ಶುಲ್ಕ ಮರುಪಾವತಿಗೆ ಅರ್ಹರಿದ್ದು ಅಗತ್ಯ ದಾಖಲೆಗಳನ್ನು SSP PORTAL ನಲ್ಲಿ UP LOAD ಮಾಡಿ ಶುಲ್ಕ ಮರುಪಾವತಿಗಾಗಿ ಅರ್ಜಿ ಸಲ್ಲಿಸಬಹುದು.
- ಈ ಯೋಜನೆಯಡಿ ಶುಲ್ಕ ಮರುಪಾವತಿಗೆ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ಇತರೆ ಇಲಾಖೆಗಳು ನೀಡುವ ವಿದ್ಯಾರ್ಥಿವೇತನ ಅಥವಾ ಶುಲ್ಕ ಮರುಪಾವತಿ ಮಂಜೂರಾತಿ ಪಡೆಯಲು ಅರ್ಹರಿರುವುದಿಲ್ಲ.

(ಕರಡು ಪತ್ರ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)

ನಿರ್ದೇಶಕರು

ಕಾಲೇಜು ಶಿಕ್ಷಣ ಇಲಾಖೆ

ಇವರಿಗೆ,

1) ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ, ಬೆಂಗಳೂರು, ಮೈಸೂರು, ಮಂಗಳೂರು, ಶಿವಮೊಗ್ಗ, ಧಾರವಾಡ, ಕಲಬುರಗಿ.
2) ಇಲಾಖಾ ವ್ಯಾಪ್ತಿಯ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.ಕಾಲೇಜಿನ ಸೂಚನಾ ಫಲಕದಲ್ಲಿ ಸುತ್ತೋಲೆಯನ್ನು ಪ್ರಕಟಿಸಿ ಮಾಹಿತಿಯನ್ನು ವಿದ್ಯಾರ್ಥಿಗಳ ಗಮನಕ್ಕೆ ತರುವುದು.
3) ಮಾಹಿತಿ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು.
4) ಕಛೇರಿ ಪ್ರತಿ